ಯಾಕಂದರ, ನಾವು ಹ್ಯೂಮನ್ ಬೀಯಿಂಗ್ಸ್. ವಿ ಫೀಲ್ ಫಾರ್ ಇಟ್. ಯುದ್ಧ ಅಂದರ ಭಯಂಕರ ಡಿಸ್ಟರ್ಬ್ ಆಗ್ತದ. ಮೂಲ ಹ್ಯೂಮನ್ ರೇಸ್ ಲಾಸ್ ಆಗಲಿಕ್ಕ ಹತ್ಯಾದರಿ. ಇರಾನ್–ಇರಾಕ್ ಯುದ್ಧ ನೋಡ್ರಿ. ಒಂದೇ ಧರ್ಮದೊಳಗಿದ್ದರೂ ಯಾಕ್ ಹಿಂಗ ಜಗಳಾಡ್ತಾರೊ ಏನೊ? ಅಫ್ಘಾನಿಸ್ತಾನದ ಯುದ್ಧ ನೋಡಿ ನಾವು ಊಟ ಮಾಡಲಿಲ್ಲಾರಿ. ಎಷ್ಟು ತ್ರಾಸ ಪಡ್ತಾರ ಜನ? ನಾವು ಎಜುಕೇಟೆಡ್ ಆಗಿ ಏನೂ ಮಾಡಾಕ ಆಗಲ್ಲವಲ್ಲದು. ನೀವೊಬ್ಬ ಲೇಖಕರಾಗಿ ಏನು ಮಾಡಬಲ್ಲಿರಿ? ಈ ಪ್ರಶ್ನೆ ಅನಂತಮೂರ್ತಿಗೂ ಕೇಳಿದ್ದೆ. 'ರಿಯಲಿ ಕಸ್ತೂರಿ, ವಿ ಕಾಂಟ್ ಡೂ ಎನಿತಿಂಗ್' ಅಂತ ಹತ್ತ ಸರ್ತೆ ಹೇಳಿದರು.

◆ ಖಲೀಲ್ ಗಿಬ್ರಾನ್ ಮೇಲೆ ಕತೆ ಬರೆದಿರಿ. ಅವನ ಪ್ರೇಮಪತ್ರಗಳನ್ನು ಅನುವಾದಿಸಿದಿರಿ. ಗಿಬ್ರಾನ್ ಬಗ್ಗೆ ಯಾಕೆ ಸೆಳೆತ?

ನೋಡ್ರಿ, ಅಮೆರಿಕಕ್ಕೆ ಹೋದಾಗ ಅವನಿಗೆ ಪಾಪಪ್ರಜ್ಞೆ ಕಾಡ್ತು. ನೇಟಿವಿಟಿಯಿಂದ ದೂರಿದ್ದ. ಆಗ ಫೋನಿಲ್ಲ ಟೆಲಿಗ್ರಾಮಿಲ್ಲ. ಆಗ ಕಾಣದೆಯಿದ್ದ ಒಬ್ಬ ಪೊಯೆಟೆಸ್‌ಗೆ ಬರೆದ ಪತ್ರಗಳು ಅವು–ನೂರು ವರ್ಷದ ಕೆಳಗ. ಅವನು ಮಕ್ಕಳ ಬಗ್ಗೆ ಆಡಿದ ಮಾತುಗಳು ಎಂಥವು! ಮಗು ತನ್ನ ತಲೆಯೊಳಗ ಏನು ಬರ್ತದ ಅದನ್ನೇ ಮಾಡ್ತದ. ನೀವು ಏನಾರ ಚಾಕಲೇಟ್ ಕೊಡೋಕೆ ಹೋಗರಿ, ಆಕಾಶದ ಕಡೆ ಮಾಡಿ ಅಂಗೈ ಹಿಡೀತದ. ಅನಂತತೆಯತ್ತ ಕೈಚಾಚತದ. ಇದನ್ನು ಪ್ರತಿ ಗ್ಯಾದರಿಂಗನೊಳಗ ಹೇಳತಿದ್ದೆ. ಯಾವ ಲೇಖಕ ಡೌನ್ ಟು ದ ಅರ್ತ್ ಇರ್ತಾನ, ಹೂ ಅಂಡರ್‌ಸ್ಟ್ಯಾಂಡ್ಸ್ ದ ಪ್ರಾಬ್ಲಮ್ಸ್ ಆಫ್ ದಿ ಕಾಮನ್‌ಪೀಪಲ್, ಅಂತಹ ರೈಟರ್ ನನಗಿಷ್ಟ. ಆಂಟಿಹ್ಯೂಮನ್ ರೈಟಿಂಗ್ ಯಾವತ್ತೂ ಇಷ್ಟಪಡೋದಿಲ್ಲ. ಮಣ್ಣು ತಂಪಿದ್ರೆ ಬೀಜ ಮೊಳಕೆ ಒಡೀತಾವ. ರೈಟಿಂಗಿನೊಳಗ ಡೆಲಿಕಸಿ ಆಫ್ ಮೈಂಡ್ ಅಂತಿರ್ತದ. ಅದನ್ನ ಬಿಟ್ಟು ಬರದರ ಜಸ್ಟ್ ಸ್ಟೇಟ್‌ಮೆಂಟ್ ಆಗತದ. ಪಂಪ ಕುಮಾರವ್ಯಾಸ ಬರದ ಎಷ್ಟು ವರ್ಷ ಆತು? ಯಾಕವರು ಇಷ್ಟ ಆಗ್ತಾರ? ಯಾಕಂದ್ರ, ಅವರ ಭಾಷೆಯಲ್ಲಿ ಬದುಕಿನ ಒಂದು ಆರ್ದ್ರತೆ ತುಂಬ್ಯದ. ಕುವೆಂಪು, ಬೇಂದ್ರೆ, ಶಿವರುದ್ರಪ್ಪ, ಜಯಂತ ಅವರಲ್ಲೂ ಈ ಆರ್ದ್ರತೆ ಅದ.

◆ ಲೇಖಕರು ಪರಂಪರೆಯಿಂದ ಪ್ರೇರಣೆ ಪಡೆಯೋದು, ಜೀರ್ಣಿಸಿಕೊಂಡು ತಮ್ಮದನ್ನಾಗಿ ಮಾಡಿಕೊಳ್ಳೋದು ಇರುತ್ತೆ. ನಿಮ್ಮ ಅನುಭವ ಏನು?

ಕುವೆಂಪು ಅವರ ಜೀವನದರ್ಶನ, ಕಾರಂತರ ಬದುಕಿನ ಜಟಿಲ ಸಮಸ್ಯೆಗಳನ್ನು ಕಾಣಿಸೋ ರೀತಿ, ಮಾಸ್ತಿಯವರ ಬದುಕಿನ ಸಹನೆ, ಇಂದಿರಾ, ಅನುಪಮಾ, ವಾಣಿ, ತ್ರಿವೇಣಿ ಇವರಲ್ಲಿರೋ ಹೆಣ್ಮಕ್ಕಳ ಸೂಕ್ಷ್ಮದನಿ ಅರ್ಥಮಾಡಕೊಂಡೀನಿ. ಇಂದಿರಾರ 'ತುಂಗಭದ್ರಾ', 'ಸದಾನಂದ' ವಂಡರಫುಲ್ ನಾವಲ್ಸ್. ಆ 'ಸದಾನಂದ'ನ್ನ ಎಷ್ಟು ಸತಿ ಓದಬೇಕ್ರಿ ನಾವು? ವಿಡಂಬನೆಯಿಂದ ರಫ್‌ಆಗಿ ಟಫ್‌ಆಗಿ ಬರೆಯೋದನ್ನ ಇಷ್ಟಪಡಲ್ಲ. ಬಂಡಾಯ ಬೇಡಂತಲ್ಲ. ಅದು ಸಾಹಿತ್ಯದೊಳಗ ಸೂಕ್ಷ್ಮವಾಗಿ ಅಳವಡಿಕೆಯಾಗಬೇಕು. ಜಗತ್ತಿನ ಎಲ್ಲ ಸಾಹಿತ್ಯ ಓದಬೇಕು. ಆದರೆ, ನಮ್ಮೊಳಗಿನ ಅನುಭವವನ್ನೇ ಬರೀಬೇಕು. ತಮ್ಮ ಅನುಭವವನ್ನ ಹೇಳೊ ಗಟ್ಟಿತನ ಕಮಲಾದಾಸ್, ಅಮೃತಾಪ್ರೀತಂ ಅವರಲ್ಲದ. ಅದು ನನ್ನ ಕಡೆ ಖಂಡಿತಾ ಸಾಧ್ಯವಿಲ್ಲ.

◆ ಇವರ ಗಟ್ಟಿತನ ನೀವು ಉಲ್ಲೇಖಿಸಿದ ಕನ್ನಡ ಲೇಖಕಿಯರಲ್ಲಿ ಇಲ್ಲವಾ?

ಏನೋ ಹೇಳಬೇಕು ಅಂತ ವಿಚಾರ ಮಾಡ್ತಾರ. ಆದರೆ, ಅವರೊಳಗ ಕಟ್ಟುಪಾಡದಾವ. ಹೆಣ್ಣಿನ